ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER.                ದಿನಾಂಕ : DATE 14/9/2020

# ಮೂರು ವಾರಕ್ಕೆ ಅಧಿವೇಶನ ವಿಸ್ತರಿಸಿ

**ಬೆಂಗಳೂರು:** ಸೆ.21ರಿಂದ ಆರಂಭವಾಗಲಿರುವ ರಾಜ್ಯ ವಿಧಾನಮಂಡಲ ಅಧಿವೇಶನವನ್ನು ಕನಿಷ್ಠ ಮೂರು ವಾರಗಳ ಕಾಲ ನಡೆಯುವಂತೆ ವಿಸ್ತರಿಸಲು ಮಾಜಿ ಸಚಿವ ಆರ್.ವಿ.ದೇಶಪಾಂಡೆ ಒತ್ತಾಯಿಸಿದ್ದಾರೆ. ಕೋವಿಡ್ ಪರಿಸ್ಥಿತಿ ಸೇರಿದಂತೆ ಹಲವು ಗಂಭೀರ ವಿಚಾರಗಳ ಬಗ್ಗೆ ಚರ್ಚೆ ನಡೆಸಬೇಕಾಗಿರುವುದರಿಂದ ಅಧಿವೇಶನವನ್ನು ಕೇವಲ ಎಂಟು ದಿನಗಳವರೆಗೆ ಸೀಮಿತಗೊಳಿಸಿರುವುದು ಸರಿಯಲ್ಲ ಎಂದಿದ್ದಾರೆ. ಈ ಬಗ್ಗೆ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರಿಗೆ ಪತ್ರ ಬರೆದಿರುವ ದೇಶಪಾಂಡೆ, ಅಧಿವೇಶನದಲ್ಲಿ ಬಹಳಷ್ಟು ವಿಷಯಗಳನ್ನು ಚರ್ಚಿಸಬೇಕಾಗಿದ್ದು ಸುಮಾರು 20ಕ್ಕಿಂತ ಹೆಚ್ಚು ಸುಗ್ರೀವಾಜ್ಞೆಗಳನ್ನು ಒಳಗೊಂಡಂತೆ 35ಕ್ಕೂ ಹೆಚ್ಚು ಮಸೂದೆಗಳನ್ನು ಮಂಡಿಸಲಾಗುತ್ತಿದೆ. ಅಲ್ಲದೇ ಕೋವಿಡ್ ಸಂಕಷ್ಟ, ಭೀಕರ ಮಳೆ, ಪ್ರವಾಹ ಹಾಗೂ ಡ್ರಗ್ಸ್‌ನಂತಹ ಗಂಭೀರ ವಿಷಯಗಳ ಚರ್ಚೆಗೆ ಹೆಚ್ಚು ಸಮಯಾವಕಾಶ ಸಾಕಾಗದು ಎಂದಿದ್ದಾರೆ.



ಜನರ ಆಶೀರ್ವಾದದಿಂದ ನಾನು ಕೋವಿಡ್ ಸೋಂಕಿನಿಂದ ಗುಣಮುಖನಾಗಿದ್ದೇನೆ. ಆದರೆ ಇನ್ನೂ ಒಂದು ವಾರ ಹೋಂ ಕ್ವಾರಂಟೈನ್ ಇರಬೇಕಾಗಿರುವುದರಿಂದ ನಾನು ಯಾರನ್ನೂ ಭೇಟಿ ಮಾಡಲು ಸಾಧ್ಯವಿಲ್ಲ. ಎಲ್ಲರೂ ದಯವಿಟ್ಟು ಸಹಕರಿಸಬೇಕು.

– ಡಿ.ಕೆ.ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷ